(ಇಂದು ದಿನಾಂಕ:17-06-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ: ಎದುರುದಾರರ ನಂ.2 ರವರ ಪರ ಶ್ರೀ ಯು ಕೆ ವಾಯ್ ವಕೀಲರಿಂದ :-**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

**ಪಾಟೀ ಸವಾಲು: ಅರ್ಜಿದಾರ ಪರ ಶ್ರೀ ಬಿ ಬಿ ವಕೀಲರಿಂದ**

1. ಸಿಂಧನೂರು-ಮಸ್ಕಿ ರಸ್ತೆ ರಾಜ್ಯ ಹೆದ್ದಾರಿ ಎಂದರೆ ಸರಿ. ಅಪಘಾತವು ನನ್ನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ಕಾರ ಚಾಲಕನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲೀಸರು ಹಾಜರಪಡಿಸಿದ ನಕಾಶೆಯಲ್ಲಿ ತೋರಿಸಿರುವ ಅಂಶಗಳು ಸರಿ ಇರುತ್ತವೆ ಎಂದರೆ ಸರಿಯಲ್ಲ. ಪರಿಹಾರ ಕೊಡುವುದನ್ನು ತಪ್ಪಿಸಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಸುಳ್ಳು ಅಂಶಗಳನ್ನು ಬರೆಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು